ಪ್ರಧಾನ ಸಿವಿಲ್ ನ್ಯಾಯಾಧೀಶರು ಮತ್ತು ಜೆ.ಎಂ.ಎಫ್.ಸಿ ನ್ಯಾಯಾಲಯ, ಮೂಡಿಗೆರೆ

ಸಿ.ಸಿ. ಸಂಖ್ಯೆ: **1792/2024**

ಪಿರ್ಯಾದಿ : ಎನ್.ಎನ್.ಪ್ರಸನ್ನ ಕುಮಾರ್,
ವಯಸ್ಸು ಸುಮಾರು 72 ವರ್ಷ,
ಬಿನ್ ಎನ್.ಕೆ.ನಂಜುಂಡೇಗೌಡ,
ವಾಸಃ ಲೋಕವಳ್ಳಿ ಗ್ರಾಮ,
ಮೂಡಿಗೆರೆ ಅಂಚೆ ಮತ್ತು ತಾಲ್ಲೂಕು,
ಚಿಕ್ಕಮಗಳೂರು ಜಿಲ್ಲೆ.

ವಿರುದ್ಧ

ಆರೋಪಿ : ಕೆ.ಆರ್.ಸರೋಜ,
ವಯಸ್ಸು ಸುಮಾರು 57 ವರ್ಷ,
ಕೋಂ ದಿಃ ಟಿ.ಎಂ.ಸುಬ್ರಹ್ಮಣ್ಯ,
ವಾಸಃ ತರುವೆ ಗ್ರಾಮ,
ಕೊಟ್ಟಿಗೆಹಾರ ಅಂಚೆ,
ಬಣಕಲ್ ಹೋಬಳಿ,
ಮೂಡಿಗೆರೆ ತಾಲ್ಲೂಕು.

ಆಪಾದನೆಯ ಸಾರಾಂಶ

ಶ್ರೀ ವಿಶ್ವನಾಥ್ ಎ., ಪ್ರಧಾನ ಸಿವಿಲ್ ನ್ಯಾಯಾಧೀಶರು ಮತ್ತು ಜೆ.ಎಂ.ಎಫ್.ಸಿ ನ್ಯಾಯಾಲಯ, ಮೂಡಿಗೆರೆ, ಆದ ನಾನು, ಆರೋಪಿಯಾದ ನಿಮ್ಮ ಮೇಲೆ ಮಾಡುವ ಆಪಾದನೆ ಏನೆಂದರೆಃ-

ಆರೋಪಿಯಾದ ನೀವು ಪಿರ್ಯಾದುದಾರರಿಗೆ ಜಮೀನನ್ನು ಮಾರಾಟ ಮಾಡುವುದಾಗಿ ಕರಾರು ಒಪ್ಪಂದದ ಮುಖಾಂತರ ಮುಂಗಡವಾಗಿ ಅವರಿಂದ 10,00,000/- ರೂಪಾಯಿಗಳನ್ನು ಸಾಲವಾಗಿ ಪಡೆದಿದ್ದು, ನಂತರ ನೀವು ಪಿರ್ಯಾದುದಾರರಿಗೆ ಖಾತೆ ಮಾಡಿಕೊಡಲು ವಿಫಲರಾದ ಕಾರಣ, ಸದರಿ ಹಣದ ಮರುಪಾವತಿಗಾಗಿ ನಿಮ್ಮ ಖಾತೆ ಹೊಂದಿರುವ ಕರ್ನಾಟಕ ಗ್ರಾಮೀಣ ಬ್ಯಾಂಕ್, ಕೊಟ್ಟಿಗೆಹಾರ ಶಾಖೆಯ ಚೆಕ್ ಸಂಖ್ಯೆ 008411, ದಿನಾಂಕ 31.05.2024, ರೂ.10,00,000/- ಎಂದು ನಮೂದಿಸಿ ನೀಡಿದ್ದು, ಸದರಿ ಚೆಕ್ ಅನ್ನು ಫಿರ್ಯಾದಿಯು ಬ್ಯಾಂಕ್ ಆಫ್ ಬರೋಡಾ, ಮೂಡಿಗೆರೆ ಶಾಖೆಯಲ್ಲಿ ಜಮೆಗಾಗಿ ಸಲ್ಲಿಸಿದಾಗ, ನಿಮ್ಮ ಖಾತೆಯಲ್ಲಿ ಸಾಕಷ್ಟು ಹಣವಿಲ್ಲ (Funds Insufficient) ಎಂದು ಹಿಂಬರಹ ನೀಡಿರುತ್ತಾರೆ. ಕಾರಣ, ಫಿರ್ಯಾದಿಯು ದಿನಾಂಕ 03.09.2024 ರಂದು ನೋಟೀಸ್ ಮೂಲಕ ಆರೋಪಿಯಾದ ನಿಮಗೆ ಸದರಿ ವಿಚಾರವನ್ನು ತಿಳಿಸಿದರೂ ಸಹ ನೀವು

ಹಣವನ್ನು ವಾಪಸ್ ಮಾಡಿರುವುದಿಲ್ಲ. ಈ ರೀತ್ಯಾ ನೀವು ನೆಗೋಷಿಬಲ್ ಇನ್ಸ್ಟ್ರುಮೆಂಟ್ ಆಕ್ಟ್ ಕಲಂ 138 ರಡಿಯಲ್ಲಿ ಶಿಕ್ಷಾರ್ಹ ಅಪರಾಧವನ್ನು ಮಾಡಿರುವಿರಿ ಎಂದು ಆಪಾದಿಸಲಾಗಿದೆ?

ಪ್ರ: 1. ಈಗ ಮೇಲೆ ಓದಿ ಹೇಳಿದ ಆಪಾದನೆಯನ್ನು ಕೇಳಿದ್ದೀರಾ? ಅದು ನಿಮಗೆ ಅರ್ಥವಾಯಿತೇ?

ಆರೋಪಿಯ ಉತ್ತರ:

ಪ್ರ: 2. ನೀವು ಆಪಾದನೆಯನ್ನು ಒಪ್ಪಿಕೊಳ್ಳುವಿರೋ ಅಥವಾ ವಿಚಾರಣೆಯಾಗಬೇಕೋ?

ಆರೋಪಿಯ ಉತ್ತರ:

*(ದಿನಾಂಕ 14.03.2025 ರಂದು ಆಪಾದನೆಯ ಸಾರಾಂಶವನ್ನು ಆರೋಪಿಗೆ ತಿಳಿಯುವ ಭಾಷೆಯಲ್ಲಿ ಓದಿ, ಅವರ ಹೇಳಿಕೆಯನ್ನು ನನ್ನ ಸಮಕ್ಷಮದಲ್ಲಿ ಬರೆದುಕೊಳ್ಳಲಾಯಿತು. ಅದು ಸತ್ಯವಾಗಿಯೂ ಮತ್ತು ಸರಿಯಾಗಿಯೂ ಇರುತ್ತದೆ ಅಂತಾ ಪ್ರಮಾಣೀಕರಿಸುತ್ತೇನೆ)*

**sd/-**

ಮೂಡಿಗೆರೆ
ದಿನಾಂಕ: 14.03.2025

ಪ್ರಧಾನ ಸಿವಿಲ್ ನ್ಯಾಯಾಧೀಶರು ಮತ್ತು
ಜೆ.ಎಂ.ಎಫ್.ಸಿ, ಮೂಡಿಗೆರೆ.